# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 960(1304) |
| ಸದಸ್ಯರ ಹೆಸರು | ಶ್ರೀ ಚಂದ್ರಶೇಖರ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 15-03-2021 |
| ಉತ್ತರಿಸಬೇಕಾದ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಪ್ರಶ್ನೆ | ಉತ್ತರ |
|---|---|
| **ಅ)** 1994-95ರ ನಂತರ ನಡೆಯುತ್ತಿರುವ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು;<br>**ಆ)** ಅವುಗಳನ್ನು ಯಾವ ಕಾಲಮಿತಿಯೊಳಗೆ ಅನುದಾನಕ್ಕೆ ಒಳಪಡಿಸಲಾಗುವುದು? | 1995-2000 ಹಾಗೂ 2001-2005ರವರೆಗೆ ಶಾಶ್ವತ ಅನುದಾನರಹಿತವಾಗಿ ಪ್ರಾರಂಭವಾಗಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ನಮ್ಮ ಅಧ್ಯಕ್ಷತೆಯಲ್ಲಿ ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿಯವರಾದ ಶ್ರೀ ಬಸವರಾಜ ಎಸ್. ಹೊರಟ್ಟಿ ರವರ ಸಮ್ಮುಖದಲ್ಲಿ ಸಭೆಯನ್ನು ಏರ್ಪಡಿಸಿ. ಸದರಿ ಸಭೆಯಲ್ಲಿ 1995-2000 ಹಾಗೂ 2001-2005ರವರೆಗೆ ಶಾಶ್ವತ ಅನುದಾನರಹಿತವಾಗಿ ಪ್ರಾರಂಭವಾಗಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಪ್ರತಿ 5 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳು ಎಷ್ಟು ಮತ್ತು ಸದರಿ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು/ಉಪನ್ಯಾಸಕರುಗಳು/ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಬ್ಲಾಕ್ ಅವಧಿಯ ಮಾಹಿತಿಯನ್ನು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ. |

ಇಪಿ 67 ಪಿಎಂಸಿ 2021

[ ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.